# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1557
ಸದಸ್ಯರ ಹೆಸರು : ಶ್ರೀ ಎಸ್.ರವಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
ಉತ್ತರಿಸುವ ದಿನಾಂಕ : 11-03-2022.
ಉತ್ತರಿಸುವವರು : ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು.

| ಕ್ರಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ಕೊರೋನಾ ನಿಯಂತ್ರಣಕ್ಕಾಗಿ ಬಿಡುಗಡೆಯಾಗಿರುವ ಅನುದಾನವನ್ನು ಕೆಲವು ಗ್ರಾಮ ಪಂಚಾಯಿತಿಗಳಲ್ಲಿ ದುರ್ಬಳಕೆ ಮಾಡಿಕೊಂಡಿರುವ ಪ್ರಕರಣಗಳು ಸರ್ಕಾರದ ಗಮನಕ್ಕೆ ಬಂದಿವೆಯೇ; ಬಂದಿದ್ದಲ್ಲಿ. ಯಾವ ಯಾವ ಜಿಲ್ಲೆಗಳಲ್ಲಿ ಇಂತಹ ಎಷ್ಟು ಪ್ರಕರಣಗಳು ಕಂಡು ಬಂದಿವೆ; ಈ ಸಂಬಂಧ ಸರ್ಕಾರ ಕೈಗೊಂಡಿರುವ ಕ್ರಮಗಳೇನು; (ಪ್ರಕರಣವಾರು ವಿವರ ನೀಡುವುದು) | ಬಂದಿಲ್ಲ. |
| (ಆ) | ಕಳೆದ 3 ವರ್ಷಗಳಲ್ಲಿ ಕೋವಿಡ್ ಸಾಮಾಗ್ರಿ ಖರೀದಿಗಾಗಿ ಬೆಂಗಳೂರು ಗ್ರಾಮಾಂತರ ಮತ್ತು ರಾಮನಗರ ಜಿಲ್ಲೆಯ ಗ್ರಾಮ ಪಂಚಾಯಿತಿಗಳಿಗೆ ಬಿಡುಗಡೆಯಾದ ಅನುದಾನವೆಷ್ಟು; ಈ ಅನುದಾನದಲ್ಲಿ ಖರೀದಿಸಿದ ಕೋವಿಡ್ ಸಾಮಗ್ರಿಗಳ ವಿವರ ಮತ್ತು ಖರೀದ ಪ್ರಕ್ರಿಯೆಗಳಿಗೆ ಜಿಲ್ಲಾ ಪಂಚಾಯಿತಿಯಿಂದ ಅನುಮೋದನೆ ಪಡೆಯಲಾಗಿದೆಯೇ? (ವಿವರಗಳನ್ನು ನೀಡುವುದು) | ರಾಮನಗರ ಜಿಲ್ಲೆಯಲ್ಲಿ 127 ಗ್ರಾಮ ಪಂಚಾಯತಿಗಳಿದ್ದು, ಕಳೆದ 03 ವರ್ಷಗಳಲ್ಲಿ ಕೋವಿಡ್ ಸಾಮಗ್ರಿಗಾಗಿ ಸರ್ಕಾರದಿಂದ 2020-21ನೇ ಸಾಲಿನಲ್ಲಿ ಕೋವಿಡ್-19 (ಕೊರೋನಾ ವೈರಸ್) ವ್ಯಾಪಕತೆಯನ್ನು ತಡೆಗಟ್ಟಲು ಕಾರ್ಯಪಡೆಗಳ ಸಾಮರ್ಥ್ಯಾಭಿವೃದ್ಧಿ ಮಾಡುವುದರೊಂದಿಗೆ ಸಾರ್ವಜನಿಕರನ್ನು ಜಾಗೃತರನ್ನಾಗಿಸುವ ಸಲುವಾಗಿ ಆರ್.ಜಿ.ಎಸ್.ಎ. ತರಬೇತಿಯ ಅನುದಾನದಿಂದ ಪ್ರತಿ ಗ್ರಾಮ ಪಂಚಾಯತಿಗೆ ರೂ.20,000/-ಗಳಂತೆ 127 ಗ್ರಾಮ ಪಂಚಾಯತಿಗಳಿಗೆ ಒಟ್ಟು ರೂ. 25.40 ಲಕ್ಷಗಳನ್ನು ಬಿಡುಗಡೆ ಮಾಡಿದೆ.<br><br>2021-22ನೇ ಸಾಲಿನಲ್ಲಿ ಕೋವಿಡ್-19 ವೈರಾಣು ಸೋಂಕು ನಿಯಂತ್ರಿತ ಚಟುವಟಿಕೆಗಳನ್ನು ವಿನಿಯೋಗಿಸಲು ಗ್ರಾಮೀಣ ಭಾಗಗಳಲ್ಲಿ ಹೋಂ ಐಸೋಲೇಷನ್‌ನಲ್ಲಿರುವ ಸೋಂಕಿತರಿಗೆ ಅವಶ್ಯಕ ಮಾಸ್ಕ್, ಸ್ಯಾನಿಟೈಸರ್, ಔಷಧಿ ಹಾಗೂ ಇನ್ನಿತರೆ ವೈದ್ಯಕೀಯ ಪರಿಕರಗಳನ್ನು ಒಳಗೊಂಡ ಕೋವಿಡ್-19 ಕಿಟ್‌ಗಳನ್ನು ಪೂರೈಸಲು ರಾಮನಗರ ಜಿಲ್ಲಾಧಿಕಾರಿಗಳಿಂದ ಪ್ರತಿ ಗ್ರಾಮ ಪಂಚಾಯತಿಗಳಿಗೆ ರೂ.50,000/- ಗಳಂತೆ 127 ಗ್ರಾಮ ಪಂಚಾಯತಿಗೆ ಒಟ್ಟು ರೂ. 63.50 ಲಕ್ಷಗಳನ್ನು ಬಿಡುಗಡೆ ಮಾಡಲಾಗಿದೆ. ಸದರಿ ಅನುದಾನದಲ್ಲಿ ಪ್ರಸ್ತುತ |

| | | |
|---|---|---|
| | | 126 ಗ್ರಾಮ ಪಂಚಾಯತಿಗಳಿಗೆ ರೂ.50,000/- ಗಳಂತೆ ಒಟ್ಟು ರೂ. 63.00 ಲಕ್ಷಗಳನ್ನು ಬಿಡುಗಡೆ ಮಾಡಲಾಗಿದೆ ಹಾಗೂ ಸದರಿ ಸಾಮಗ್ರಿಗಳನ್ನು ಕರ್ನಾಟಕ ಡ್ರಗ್ಸ್ ಅಂಡ್ ಲಾಜಿಸ್ಟಿಕ್ಸ್ ವೇರ್‌ಹೌಸ್ (KDLWS) ನಲ್ಲಿ ದಾಸ್ತಾನು ಪಡೆದುಕೊಳ್ಳಲು ತಿಳಿಸಿ ಅನುದಾನ ಬಿಡುಗಡೆ ಮಾಡಿದೆ.<br><br>ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಸರ್ಕಾರದ ಆದೇಶ ಸಂಖ್ಯೆ: ಕಂಇ /193/ಟಿಎನ್‌ಆರ್/2021 ದಿನಾಂಕ: 05-06-2021 ರನ್ವಯ ಕೋವಿಡ್ ಸಾಮಗ್ರಿ ಖರೀದಿಗಾಗಿ ಪ್ರತಿ ಗ್ರಾಮ ಪಂಚಾಯತಿಗೆ ರೂ.50,000/- ಗಳನ್ನು ಬಿಡುಗಡೆ ಮಾಡಲಾಗಿದೆ. ಸಾಮಗ್ರಿ ಖರೀದಿ ಪ್ರಕ್ರಿಯೆಗಳನ್ನು ಗ್ರಾಮ ಪಂಚಾಯತಿ ಹಂತದಲ್ಲಿ ಕ್ರಮ ವಹಿಸಲಾಗಿದೆ. |

ಸಂ. ಗ್ರಾಅಪ 95 ಗ್ರಾಪಂಅ 2022

(ಕೆ.ಎಸ್. ಈಶ್ವರಪ್ಪ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರು.